**ಕರ್ನಾಟಕ ಸರ್ಕಾರ**

**ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ನೃಪತುಂಗ ರಸ್ತೆ, ಬೆಂಗಳೂರು**

ಸಂಖ್ಯೆ: ಸಿ4(6)ರಜೆ/01/2016-17 ದಿನಾಂಕ:02.03.2017

**ಜ್ಞಾಪನ**

ವಿಷಯ: 2017-18ನೇ ಸಾಲಿನ ಶೈಕ್ಷಣಿಕ ವರ್ಷದಲ್ಲಿ ರಾಜ್ಯದ ಪ್ರಾಥಮಿಕ ಹಾಗೂ ಪ್ರೌಢಶಾಲೆಗಳಿಗೆ ಶೈಕ್ಷಣಿಕ ಅವಧಿಗಳು ಮತ್ತು ರಜಾ ಅವಧಿಗಳನ್ನು ನಿಗದಿಪಡಿಸುವ ಬಗ್ಗೆ.

***********

ರಾಜ್ಯದಲ್ಲಿನ ಪ್ರಾಥಮಿಕ ಮತ್ತು ಪ್ರೌಢಶಾಲೆಗಳಿಗೆ 2017-18ನೇ ಸಾಲಿನ ಶೈಕ್ಷಣಿಕ ವರ್ಷದ ಶೈಕ್ಷಣಿಕ ಅವಧಿ, ಮಧ್ಯಂತರ ರಜೆ, ಹಾಗೂ ಬೇಸಿಗೆ ರಜೆಗಳನ್ನು ಈ ಕೆಳಗಿನ ನಿಬಂಧನೆಗೊಳಪಟ್ಟು ನಿಗದಿಪಡಿಸಿ ಆದೇಶಿಸಿದೆ.

| ಶಾಲಾ ದಿನಗಳ ವಿವರ | |
|---|---|
| ದಿನಾಂಕ 29.05.2017 ರಿಂದ 10.10.2017 | ಮೊದಲನೇ ಶೈಕ್ಷಣಿಕ ಅವಧಿ |
| ದಿನಾಂಕ 26.10.2017 ರಿಂದ 10.04.2018 | ಎರಡನೇ ಶೈಕ್ಷಣಿಕ ಅವಧಿ |
| ರಜಾ ಅವಧಿಗಳು | |
| ದಿನಾಂಕ 11.10.2017 ರಿಂದ 25.10.2017 | ಮಧ್ಯಂತರ ರಜೆ |
| ದಿನಾಂಕ 11.04.2018 ರಿಂದ 27.05.2018 | ಬೇಸಿಗೆ ರಜೆ |

ನಿಬಂಧನೆಗಳು:-

- ✓ ದಿನಾಂಕ: 11.04.2018ರಿಂದ ಬೇಸಿಗೆ ರಜೆಯನ್ನು ನೀಡಿದ್ದರೂ ಸಹ, ದಿನಾಂಕ: 14.04.2018ರಂದು ಬರುವ ಡಾ॥ ಬಿ.ಆರ್.ಅಂಬೇಡ್ಕರ್ ಜಯಂತಿಯನ್ನು ಶಾಲಾ ಶಿಕ್ಷಕರುಗಳು ಹಾಗೂ ಎಸ್‌ಡಿಎಂಸಿ ಸದಸ್ಯರು ಸೇರಿ ವಿದ್ಯಾರ್ಥಿಗಳೊಂದಿಗೆ ಕಡ್ಡಾಯವಾಗಿ ಆಚರಿಸಬೇಕು.
- ✓ ಕನ್ನಡ ರಾಜ್ಯೋತ್ಸವ ಆಚರಿಸುವ ಬೆಂಗಳೂರು ಉತ್ತರ ಹಾಗೂ ದಕ್ಷಿಣ ಜಿಲ್ಲೆಗಳ ಉಪನಿರ್ದೇಶಕರುಗಳು ತಮ್ಮ ವ್ಯಾಪ್ತಿಯ ಶಾಲೆಗಳಿಗೆ ಮಧ್ಯಂತರ ರಜಾ ಅವಧಿಯನ್ನು ಅವಶ್ಯಕತೆಗನುಗುಣವಾಗಿ ಮಾರ್ಪಡಿಸಿಕೊಳ್ಳುವ ಬಗ್ಗೆ ಸಂಬಂಧಿಸಿದ ಉಪನಿರ್ದೇಶಕರು ಶೈಕ್ಷಣಿಕ ಅವಧಿಗಳಿಗೆ ಕೊರತೆ ಬಾರದ ರೀತ್ಯಾ ಸರಿದೂಗಿಸಿ ಕೈಗೊಂಡ ಕ್ರಮದ ಬಗ್ಗೆ ಈ ಕಛೇರಿಗೆ ವರದಿ ಸಲ್ಲಿಸತಕ್ಕದ್ದು.
- ✓ ಮೇಲ್ಕಂಡಂತೆ ನಿಗಧಿಪಡಿಸಿದ ಶೈಕ್ಷಣಿಕ ಶಾಲಾ ಕರ್ತವ್ಯದ ಅವಧಿಗಳಲ್ಲಿ, ಮುಷ್ಕರ ಇನ್ನಿತರೆ ಕಾರಣಗಳಿಂದ ಜಿಲ್ಲಾ ವ್ಯಾಪ್ತಿಯಲ್ಲಿ ರಜೆ ಘೋಷಿಸಿದ್ದಲ್ಲಿ, ಅಂತಹ ಅಪವ್ಯಯಗೊಂಡ ಶಾಲಾ ಕರ್ತವ್ಯದ ದಿನಗಳನ್ನು, ಮುಂದಿನ ರಜಾ ದಿನಗಳಲ್ಲಿ ಪೂರ್ಣ ದಿನ ಶಾಲೆಗಳನ್ನು ನಡೆಸಿ ಸರಿದೂಗಿಸಿಕೊಂಡು ಶಾಲಾ ವಿದ್ಯಾರ್ಥಿಗಳ ಶೈಕ್ಷಣಿಕ ಚಟುವಟಿಕೆಗಳಿಗೆ ದಕ್ಕೆಯಾಗದ ರೀತಿ ಕ್ರಮವಹಿಸುವ ಬಗ್ಗೆ ಜಿಲ್ಲಾ ಉಪನಿರ್ದೇಶಕರುಗಳೇ ಸಂಪೂರ್ಣ ಜವಾಬ್ದಾರಿಯಾಗಿರುತ್ತಾರೆ.

ಆಯುಕ್ತರು
ಸಾರ್ವಜನಿಕ ಶಿಕ್ಷಣ ಇಲಾಖೆ

ಇವರಿಗೆ:-

1. ರಾಜ್ಯದ ಎಲ್ಲಾ ಉಪನಿರ್ದೇಶಕರು (ಆಡಳಿತ/ಅಭಿವೃದ್ಧಿ), ಸಾರ್ವಜನಿಕ ಶಿಕ್ಷಣ ಇಲಾಖೆ, ಇವರಿಗೆ ಮುಂದಿನ ಕ್ರಮಕ್ಕಾಗಿ.
2. ರಾಜ್ಯದ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳು, ಸಾರ್ವಜನಿಕ ಶಿಕ್ಷಣ ಇಲಾಖೆ ಇವರಿಗೆ ಮುಂದಿನ ಕ್ರಮಕ್ಕಾಗಿ.

**ಪು.ತಿ.ನೋ**

ಪ್ರತಿಗಳು:-

1. ಮಾನ್ಯ ಘನತೆವೆತ್ತ ರಾಜ್ಯಪಾಲರ ಆಪ್ತ ಕಾರ್ಯದರ್ಶಿಗಳು, ರವರಿಗೆ.
2. ಮಾನ್ಯ ಶಿಕ್ಷಣ ಸಚಿವರ ಆಪ್ತ ಕಾರ್ಯದರ್ಶಿಗಳು, ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ, ಕೊಠಡಿ ಸಂಖ್ಯೆ: 262/262ಎ, ವಿಧಾನಸೌಧ, 2ನೇ ಮಹಡಿ, ಬೆಂಗಳೂರು-01. ರವರಿಗೆ.
3. ಮಾನ್ಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ, ಶಿಕ್ಷಣ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು - 560 001 ರವರಿಗೆ.
4. ರಾಜ್ಯ ಯೋಜನಾ ನಿರ್ದೇಶಕರು, ಸರ್ವ ಶಿಕ್ಷಣ ಅಭಿಯಾನ, ನೃಪತುಂಗ ರಸ್ತೆ, ಬೆಂಗಳೂರು ರವರಿಗೆ.
5. ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಗುಲ್ಬರ್ಗಾ/ಧಾರವಾಡ ಸೂಕ್ತ ಕ್ರಮಕ್ಕಾಗಿ.
6. ಸಾರ್ವಜನಿಕ ಶಿಕ್ಷಣ ಇಲಾಖೆಯ ಎಲ್ಲಾ ನಿರ್ದೇಶಕರುಗಳಿಗೆ.
7. ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳಿಗೆ.
8. ಸಹನಿರ್ದೇಶಕರು, ಮಧ್ಯಾಹ್ನ ಉಪಹಾರ ಯೋಜನೆ, ಬೆಂಗಳೂರು.
9. ಅಧ್ಯಕ್ಷರು, ಕರ್ನಾಟಕ ರಾಜ್ಯ ಪ್ರಾಂಶುಪಾಲರ ಮತ್ತು ಪ್ರೌಢಶಾಲಾ ಮುಖ್ಯ ಶಿಕ್ಷಕರ ಸಂಘ, ಬೆಂಗಳೂರು.
10. ಅಧ್ಯಕ್ಷರು, ಕರ್ನಾಟಕ ರಾಜ್ಯ ಪ್ರೌಢಶಾಲಾ ಸಹ ಶಿಕ್ಷಕರ ಸಂಘ, ಬೆಂಗಳೂರು
11. ಅಧ್ಯಕ್ಷರು, ಕರ್ನಾಟಕ ರಾಜ್ಯ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘ, ಬೆಂಗಳೂರು.
12. ಸಾರ್ವಜನಿಕ ಸಂಪರ್ಕಾಧಿಕಾರಿಗಳು, ಆಯುಕ್ತರ ಕಛೇರಿ, ಸಾ.ಶಿ.ಇಲಾಖೆ, ಬೆಂಗಳೂರು
13. ಕಛೇರಿ ಪ್ರತಿ.